**ಕರ್ನಾಟಕ ಸರ್ಕಾರ**

**<u>ಶಾಲಾ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ ನೃಪತುಂಗ ರಸ್ತೆ ಬೆಂಗಳೂರು-560001</u>**

ಸಂಖ್ಯೆ : ಎ.ಡಿ.ಎಂ 2(2) ಪೋ.ಕಾ.ಅನುಷ್ಠಾನ 01/2022-23 ದಿನಾಂಕ:08.01.2024

**ಸುತ್ತೋಲೆ**

**ವಿಷಯ**:ರಾಜ್ಯದ ಶಾಲೆಗಳ ವಿದ್ಯಾರ್ಥಿಗಳಿಗೆ ಪೋಕ್ಸೋ ಕಾಯ್ದೆಯ ಬಗ್ಗೆ "ತೆರೆದ ಮನೆ" ಕಾರ್ಯಕ್ರಮದಡಿ ಜಾಗೃತಿ ಮೂಡಿಸುವ ಕುರಿತು.

**ಉಲ್ಲೇಖ**:1.ಭಾರತ ಸರ್ಕಾರ ಜಾರಿ ಮಾಡಿರುವ " ಪೋಕ್ಸೋ ಕಾಯಿದೆ 2012 " ರಂತೆ.

2. ರಾಜ್ಯ ಸರ್ಕಾರ ಜಾರಿ ಮಾಡಿರುವ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ 2016.
3. ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಪ್ರ.ಕಾ.ವಿ (SOP) ಮತ್ತು ಮಾರ್ಗಸೂಚಿಯ ಅನುಸಾರ.
4. ಈ ಕಛೇರಿಯ ಸುತ್ತೋಲೆ ಪತ್ರ ಸಂಖ್ಯೆ ಎಡಿಎಂ2(2)ಪೋ.ಕಾ.ಅನುಷ್ಠಾನ 01/2022-23 ದಿನಾಂಕ:08.11.2022
5. ಸರ್ಕಾರದ ಪತ್ರ ಸಂಖ್ಯೆ ಇಡಿ 10 ಎಸ್.ಎಲ್.ಬಿ 2023 ದಿನಾಂಕ:20/11/2023
6. ಅಪರ ಆಯುಕ್ತರು ಶಾಲಾ ಶಿಕ್ಷಣ ಇಲಾಖೆ ಧಾರವಾಡ ರವರ ಪತ್ರ ಸಂಖ್ಯೆ ಸಾ.ಸಂ.100515-2021/2022-23 ದಿನಾಂಕ: 15.12.2023.

*******

18 ವರ್ಷದೊಳಗಿನ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯಗಳು, ಕಿರುಕುಳ, ಅತ್ಯಾಚಾರಗಳಂತಹ ದುರ್ಘಟನೆಗಳನ್ನು ತಡೆಗಟ್ಟಲು ಹಾಗೂ ಮಕ್ಕಳಿಗೆ ರಕ್ಷಣೆ , ಭದ್ರತೆ ಮತ್ತು ನ್ಯಾಯ ಒದಗಿಸುವುದರ ಜೊತೆಗೆ ಅವರ ಆಸಕ್ತಿ ಮತ್ತು ಹಿತ ಕಾಪಾಡುವ ಉದ್ದೇಶಗಳನ್ನು ಇರಿಸಿಕೊಂಡು " ಪೋಕ್ಸೋ ಕಾಯಿದೆ-2012 " ಅನ್ನು ಉಲ್ಲೇಖ-1ರನ್ವಯ ಭಾರತ ಸರ್ಕಾರವು ಜಾರಿಗೆ ತಂದಿರುತ್ತದೆ.

ರಾಜ್ಯದಲ್ಲಿನ ಪ್ರತಿಯೊಂದು ಮಗುವು ಎಲ್ಲಾ ಸಂದರ್ಭಗಳಲ್ಲಿಯೂ ಎಲ್ಲಾ ರೀತಿಯ ಹಿಂಸೆ, ನಿರ್ಲಕ್ಷ್ಯ ಮತ್ತು ಶೋಷಣೆಯಿಂದ ರಕ್ಷಣೆ ಮತ್ತು ಸುರಕ್ಷತೆಯನ್ನು ನೀಡುವ ಸಲುವಾಗಿ ಹಾಗೂ ಎಲ್ಲಾ ಸಾಮಾಜಿಕ ವಲಯಗಳು ವಿಶೇಷವಾಗಿ ಸಮಾಜ ಕಲ್ಯಾಣ, ಶಿಕ್ಷಣ, ಆರೋಗ್ಯ, ಭದ್ರತೆ ಮತ್ತು ಸಾಮಾಜಿಕ ನ್ಯಾಯ ಇವುಗಳನ್ನು ಮಕ್ಕಳಿಗೆ ದೊರಕಿಸಿಕೊಡುವ ನಿಟ್ಟಿನಲ್ಲಿ ಹಾಗೂ ಲಿಂಗತ್ವ, ನಾಗರೀಕತೆಯೂ ಸೇರಿದಂತೆ ಎಲ್ಲಾ ಆರ್ಥಿಕ, ಸಾಮಾಜಿಕ, ರಾಜಕೀಯ, ಸಾಂಸ್ಕೃತಿಕ ಅಥವಾ ಭೌಗೋಳಿಕ ತಾರತಮ್ಯಗಳನ್ನು ತೊಡೆದು ಹಾಕುವ ಉದ್ದೇಶಗಳಿಂದ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ 2016ನ್ನು ರಾಜ್ಯ ಸರ್ಕಾರವು ಉಲ್ಲೇಖ-2ರನ್ವಯ ಜಾರಿಗೊಳಿಸಿರುತ್ತದೆ.

ರಾಜ್ಯದ ಎಲ್ಲಾ ಶಾಲೆಗಳಲ್ಲಿ " ಪೋಕ್ಸೋ ಕಾಯಿದೆ 2012" ಮತ್ತು "ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016" ಅನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುವ ನಿಟ್ಟಿನಲ್ಲಿ ಸಂಬಂಧಿಸಿದ ಇಲಾಖೆಗಳು, ಶಾಲೆಗಳು, ಆಡಳಿತ ಮಂಡಳಿಗಳು, ಪೋಷಕರು ಎಸ್.ಡಿ.ಎಂ.ಸಿ ಹಾಗೂ ಇತರರು ಸೇರಿದಂತೆ ಎಲ್ಲಾ ಪಾಲುದಾರರು/ ಭಾಗಿದಾರರು (All Stake holders) ಕೈಗೊಳ್ಳಬೇಕಾದ ಕ್ರಮಗಳನ್ನು ಒಳಗೊಂಡ ಪ್ರಮಾಣೀಕೃತ ಕಾರ್ಯಚರಣಾ ವಿಧಾನ (SOP) ಅನ್ನು ಮತ್ತು ಮಾರ್ಗಸೂಚಿಯನ್ನು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಉಲ್ಲೇಖ-3ರನ್ವಯ ಹೊರಡಿಸಿರುತ್ತದೆ.

ರಾಜ್ಯದ ಎಲ್ಲಾ ಶಾಲೆಗಳಲ್ಲಿ " ಪೋಕ್ಸೋ ಕಾಯಿದೆ 2012" ಮತ್ತು "ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ನೀತಿ-2016" ಇವುಗಳ ಕುರಿತು ಶಾಲಾ ವಿದ್ಯಾರ್ಥಿಗಳಿಗೆ, ಶಿಕ್ಷಕರಿಗೆ ಮತ್ತು ಸಂಬಂಧಿಸಿದ ಇಲಾಖಾಧಿಕಾರಿಗಳಿಗೆ ಅರಿವು ಮೂಡಿಸಲು ಹಾಗೂ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಎಲ್ಲಾ ಪಾಲುದಾರರು/ ಭಾಗಿದಾರರು (All Stake holders) ಕೈಗೊಳ್ಳಬೇಕಾದ ಕ್ರಮಗಳ ಕುರಿತು ಉಲ್ಲೇಖ-4 ರನ್ವಯ ವಿಸ್ತೃತವಾಗಿ ತಿಳಿಸಲಾಗಿರುತ್ತದೆ.

Scanned with ACE Scanner

ಮುಂದುವರೆದು, ಘನ ಉಚ್ಛ ನ್ಯಾಯಾಲಯ, ಧಾರವಾಡ ಪೀಠ ಇಲ್ಲಿನ ಕ್ರಿಮಿನಲ್ ಅಪೀಲು ಸಂಖ್ಯೆ: 100515/2021 ರಲ್ಲಿ ದಿನಾಂಕ: 04.11.2022 ರಂದು ಮಾನ್ಯ ನ್ಯಾಯಾಲಯ ನೀಡಿರುವ ತೀರ್ಪಿನಂತೆ, ಪೋಕ್ಸೋ ಕಾಯ್ದೆ-2012, ಮಕ್ಕಳ ರಕ್ಷಣಾ ನೀತಿ-2016 ಮತ್ತು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಪ್ರ.ಕಾ.ವಿ (SOP) ಮತ್ತು ಮಾರ್ಗಸೂಚಿ ಹಾಗೂ ಇಲಾಖೆಯಿಂದ ಕಾಲಕಾಲಕ್ಕೆ ನೀಡಲಾಗಿರುವ ಪೋಕ್ಸೋ ಕಾಯ್ದೆಯ ಎಲ್ಲಾ ಅಂಶಗಳನ್ನು ಪಾಲಿಸುವುದು.

ಈ ಸಂಬಂಧ ರಾಜ್ಯ ಯೋಜನಾ ನಿರ್ದೇಶಕರು ಹಾಗೂ ಅಧ್ಯಕ್ಷರು, ಪೋಕ್ಸೋ ಕಾಯ್ದೆ ಅರಿವು ಮೂಡಿಸುವ ಸಮಿತಿ, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರ ನಡಾವಳಿ ದಿನಾಂಕ: 31.05.2023 ರಂತೆ, ರಾಜ್ಯದ ಎಲ್ಲಾ ಸರ್ಕಾರಿ ಅನುದಾನಿತ ಮತ್ತು ಖಾಸಗಿ ಶಾಲೆಗಳಲ್ಲಿ ಪೋಕ್ಸೋ ಕಾಯಿದೆ ಬಗ್ಗೆ " ತೆರೆದ ಮನೆ " ಕಾರ್ಯಕ್ರಮದಡಿ ಜಾಗೃತಿ ಮೂಡಿಸಲು ಅಗತ್ಯ ಕ್ರಮವಹಿಸುವಂತೆ ಡಿ.ಡಿ.ಪಿ.ಐ ಹಾಗೂ ಬಿ.ಇ.ಒ ಗಳಿಗೆ ಜ್ಞಾಪನ / ಸುತ್ತೋಲೆಗಳನ್ನು ಹೊರಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಉಲ್ಲೇಖ-05 ರ ಸರ್ಕಾರದ ಪತ್ರದಲ್ಲಿ ತಿಳಿಸಲಾಗಿದೆ. ಅದರಂತೆ ಕ್ರಮವಹಿಸುವಂತೆ, ಉಲ್ಲೇಖ-06 ರ ಪತ್ರದಲ್ಲಿ ಕೋರಲಾಗಿದೆ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ, ರಾಜ್ಯದ ಎಲ್ಲಾ ಸರ್ಕಾರಿ ಅನುದಾನಿತ ಮತ್ತು ಖಾಸಗಿ ಶಾಲೆಗಳಲ್ಲಿ ಉಲ್ಲೇಖ-01 ರ ಪೋಕ್ಸೋ ಕಾಯ್ದೆ-2012, ಉಲ್ಲೇಖ-02 ರ ಮಕ್ಕಳ ರಕ್ಷಣಾ ನೀತಿ-2016 ಮತ್ತು ಉಲ್ಲೇಖ-03 ರ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಪ್ರ.ಕಾ.ವಿ (SOP) ಮತ್ತು ಮಾರ್ಗಸೂಚಿ, ಉಲ್ಲೇಖ-04 ರ ಈ ಕಛೇರಿಯ ಸುತ್ತೋಲೆ ಹಾಗೂ ಇಲಾಖೆಯಿಂದ ಕಾಲಕಾಲಕ್ಕೆ ನೀಡಲಾಗಿರುವ ಪೋಕ್ಸೋ ಕಾಯ್ದೆಯ ಕುರಿತಾದ ಎಲ್ಲಾ ಅಂಶಗಳ ಕುರಿತು ಶಾಲೆಗಳಲ್ಲಿ ಪ್ರಾರ್ಥನಾ ಸಮಯದಲ್ಲಿ, ಬಿಡುವಿನ ವೇಳೆಯಲ್ಲಿ, ಸಂಧರ್ಭಾನುಸಾರ ಬೋಧನಾ ಅವಧಿಗಳಲ್ಲಿ, ವಿವಿಧ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ, ರಾಷ್ಟ್ರೀಯ ಹಬ್ಬಗಳ ಸಂಧರ್ಭಗಳಲ್ಲಿ ವಿದ್ಯಾರ್ಥಿಗಳಿಗೆ, ಪೋಷಕರ ಸಭೆಗಳಲ್ಲಿ, ತಾಯಂದಿರ ಸಭೆಗಳಲ್ಲಿ, ಸಮುದಾಯದತ್ತ ಶಾಲೆ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳು ಮತ್ತು ಪೋಷಕರಿಗೆ ಹಾಗೂ ಶಾಲಾ ಆವರಣದಲ್ಲಿ, ಶಾಲಾ ಸಭಾಂಗಣದಲ್ಲಿ, ಸಾರ್ವಜನಿಕ ಸ್ಥಳಗಳಲ್ಲಿ, ಪೊಲೀಸ್ ಇಲಾಖೆಯ ಸಹಯೋಗದೊಂದಿಗೆ **" ತೆರೆದ ಮನೆ " (OPEN HOUSE)** ಕಾರ್ಯಕ್ರಮದಡಿ ಶಾಲಾ ವಿದ್ಯಾರ್ಥಿಗಳು, ಶಿಕ್ಷಕರು, ಪೋಷಕರು ಸೇರಿದಂತೆ ಎಲ್ಲಾ ಪಾಲುದಾರರಿಗೆ / ಭಾಗಿದಾರರಿಗೆ (All Stake holders) ಜಾಗೃತಿ ಮೂಡಿಸಲು ನಿಯಮಾನುಸಾರ ಅಗತ್ಯಕ್ರಮಗಳನ್ನು ವಹಿಸುವಂತೆ ಇಲಾಖೆಯ ಎಲ್ಲಾ ಶಾಲಾ ಉಸ್ತುವಾರಿ ಮತ್ತು ಮೇಲ್ವಿಚಾರಣಾ ಅಧಿಕಾರಿಗಳಿಗೆ ಮತ್ತು ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರಿಗೆ ಈ ಮೂಲಕ ತಿಳಿಸಲಾಗಿದೆ.

20.10.2023

ಆಯುಕ್ತರು
ಶಾಲಾ ಶಿಕ್ಷಣ ಇಲಾಖೆ

**ಇವರಿಗೆ,**

1. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ-ಕರ್ನಾಟಕ, ಬೆಂಗಳೂರು.
2. ಅಪರ ಆಯುಕ್ತರು, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ / ಧಾರವಾಡ.
3. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕ ವೃಂದದ ಅಧಿಕಾರಿಗಳಿಗೆ / ಎಲ್ಲಾ ಜಿಲ್ಲಾ ನೋಡಲ್ ಅಧಿಕಾರಿಗಳಿಗೆ.
4. ಜಂಟಿ ನಿರ್ದೇಶಕರು(ಆಡಳಿತ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
5. ಸಹ ನಿರ್ದೇಶಕರು (ಶಾಲಾ ಶಿಕ್ಷಣ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು.
6. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗೀಯ ಸಹ ನಿರ್ದೇಶಕರಿಗೆ.

Scanned with ACE Scanner

7. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಸಹ / ಜಂಟಿ ನಿರ್ದೇಶಕ ವೃಂದದ ಅಧಿಕಾರಿಗಳಿಗೆ.
8. ರಾಜ್ಯದ ಎಲ್ಲಾ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ(ಸಿ.ಟಿ.ಇ.)ಗಳ ಪ್ರಾಂಶುಪಾಲರು ಮತ್ತು ಪದನಿಮಿತ್ತ ಸಹನಿರ್ದೇಶಕರಿಗೆ.
9. ರಾಜ್ಯದ ಎಲ್ಲಾ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ.
10. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರು(ಆಡಳಿತ)ರವರಿಗೆ.
11. ರಾಜ್ಯದ ಎಲ್ಲಾ ಡಯಟ್‌ಗಳ ಪ್ರಾಂಶುಪಾಲರು ಮತ್ತು ಪದನಿಮಿತ್ತ ಉಪನಿರ್ದೇಶಕರು(ಅಭಿವೃದ್ಧಿ) ರವರಿಗೆ.
12. ಹಿರಿಯ ಸಹಾಯಕ ನಿರ್ದೇಶಕರು (ಇ-ಆಡಳಿತ), ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಇಲಾಖಾ ಅಂತರ್ಜಾಲ ತಾಣದಲ್ಲಿ ಅಳವಡಿಸಲು ತಿಳಿಸಿದೆ.
13. ಶಾಲಾ ಶಿಕ್ಷಣ ಇಲಾಖೆಯ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ (ಆಯಾ ಉಪನಿರ್ದೇಶಕರು (ಆಡಳಿತ) ರವರ ಮೂಲಕ).
14. ರಾಜ್ಯದ ಎಲ್ಲಾ ಶಿಕ್ಷಕರ ತರಬೇತಿ ಕೇಂದ್ರಗಳ (ಟಿ.ಟಿ.ಇ.) ಪ್ರಾಂಶುಪಾಲರಿಗೆ (ಆಯಾ ಡಯಟ್ ಪ್ರಾಂಶುಪಾಲರ ಮೂಲಕ).
15. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮುಖ್ಯಸ್ಥರಿಗೆ (ಆಯಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ).
16. ರಾಜ್ಯದ ಎಲ್ಲಾ ಸರ್ಕಾರಿ ಶಾಲೆಗಳ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್.ಡಿ.ಎಂ.ಸಿ) ಗಳಿಗೆ (ಆಯಾ ಶಾಲಾ ಮುಖ್ಯ ಶಿಕ್ಷಕರ ಮೂಲಕ).
17. ರಾಜ್ಯದ ಎಲ್ಲಾ ಸರ್ಕಾರಿ/ಅನುದಾನಿತ/ಅನುದಾನರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಎಲ್ಲಾ ಶಿಕ್ಷಕರಿಗೆ ಮತ್ತು ಸಿಬ್ಬಂದಿಗಳಿಗೆ (ಆಯಾ ಶಾಲಾ ಮುಖ್ಯ ಶಿಕ್ಷಕರ ಮೂಲಕ).

**ಪ್ರತಿಯನ್ನು,**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, 6 ನೇ ಮಹಡಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತೆ ಇಲಾಖಾ ಸಚಿವರ ಆಪ್ತ ಕಾರ್ಯದರ್ಶಿಗಳಿಗೆ ಕಳುಹಿಸುತ್ತಾ, ಮಾನ್ಯ ಸಚಿವರ ಆದ್ಯ ಗಮನಕ್ಕೆ ತರಲು ತಿಳಿಸಿದೆ.
3. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
4. ಡೈರಕ್ಟರ್ ಜನರಲ್ ಅಂಡ್ ಇನ್ಸಪೆಕ್ಟರ್ ಜನರಲ್ ಆಫ್ ಪೊಲೀಸ್, ನೃಪತುಂಗ ರಸ್ತೆ, ಬೆಂಗಳೂರು.
5. ನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, 18 ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಗಳೂರು.
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ.
7. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಳಿಗೆ.
8. ಕಛೇರಿ ಪ್ರತಿ.

Scanned with ACE Scanner